# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 451(599)
ಸದಸ್ಯರ ಹೆಸರು : ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 21-02-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಹುದ್ದೆ ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಹಾಗಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಹುದ್ದೆ ಭರ್ತಿ ಮಾಡಲು ಕೈಗೊಂಡ ಕ್ರಮವೇನು; | ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಈ ಕೆಳಕಂಡಂತೆ ಪ್ರಾಚಾರ್ಯರ ಹುದ್ದೆಗಳನ್ನು ತುಂಬಲು ಈಗಾಗಲೇ ಕ್ರಮವಹಿಸಲಾಗಿದೆ-<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 16 ಡಿಜಿಡಿ 2021, ದಿನಾಂಕ:04-08-2021 ರಲ್ಲಿ ಒಟ್ಟು 06 ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲಾಗಿದೆ.<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 8 ಡಿಜಿಡಿ 2021 ದಿನಾಂಕ:30-10-2021 ಮತ್ತು ದಿನಾಂಕ:27-12-2021ರಲ್ಲಿ ಒಟ್ಟು 14 ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲಾಗಿದೆ.<br><br>• ಕಲ್ಯಾಣ ಕರ್ನಾಟಕ ವೃಂದದ 39 ಪ್ರಾಂಶುಪಾಲರ ಹುದ್ದೆಗಳು ಸೇರಿದಂತೆ ನೇರ ನೇಮಕಾತಿ ಕೋಟಾದ ಒಟ್ಟು 255 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ನೇಮಕಾತಿ ಪ್ರಕ್ರಿಯೆ ನಡೆಸಿ ಅರ್ಹ ಅಭ್ಯರ್ಥಿಗಳ |

| | | |
|---|---|---|
| | | ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.<br><br>• ಉಪನ್ಯಾಸಕರ ನೇರ ನೇಮಕಾತಿಗೆ ವಿವಿಧ ವಿಷಯಗಳಿಗೆ ಸಂಬಂಧಪಟ್ಟಂತೆ ಒಟ್ಟು 1439 ಉಪನ್ಯಾಸಕರ ಹುದ್ದೆಗಳನ್ನು ತುಂಬುವ ಪ್ರಸ್ತಾವನೆ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದೆ. ಆರ್ಥಿಕ ಇಲಾಖೆಯ ಸಹಮತಿ ಬಂದ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು. |
| ಇ) | ಕಲ್ಯಾಣ ಕರ್ನಾಟಕ ಭಾಗದ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಹುದ್ದೆಗಳು ಖಾಲಿ ಇವೆ?(ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:16-02-2022ಕ್ಕೆ 518 ಉಪನ್ಯಾಸಕ ಹುದ್ದೆಗಳು ಹಾಗೂ 46 ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ. |

**ಸಂಖ್ಯೆ: ಇಪಿ 18 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು